**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 74/2020**

**ಚಾ.ಸಾ. :- 04**
**ಪ್ರಾ.ಸಾ. :- 03**

| | | |
|---|---|---|
| ಹೆಸರು | : | ಸುನೀಲ್ |
| ತಂದೆಯ ಹೆಸರು | : | ಜಯರಾಮು |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಗಂಜಾಂ. |

---

**ಪ್ರಮಾಣೀಕರಿಸಲಾದ ದಿನಾಂಕಃ- 15.09.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಫ್ಯಾಕ್ಟರಿ ಬಳಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ಆ ದಿನ ಪೊಲೀಸರು ನನ್ನ ಸಮಕ್ಷಮ ಅಪಘಾತ ಸ್ಥಳದಲ್ಲಿ ಸದರಿ ಮಹಜರ್ ಬರೆದಿದ್ದು, ಆ ಸಮಯದಲ್ಲಿ ಸ್ಥಳದಿಂದ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುುತ್ತಿದ್ದೇನೆ ಎಂದರೆ ಸರಿಯಲ್ಲ.

***<u>ಪಾಟೀ ಸವಾಲು:</u> ಆರೋಪಿ ಹಾಜರಾಗಿದ್ದು, ಆರೋಪಿ ಪರ ವಕೀಲರು ಗೈರು ಹಾಜರಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**